# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

## –:ವಾರ್ಡ್–42ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:–

ಎಂದಿನಂತೆ ದಿನಾಂಕ:– 21.01.2023 ರಂದು ಬೆಳಿಗ್ಗೆ 11.00 ಗಂಟೆಗೆ ಅಧ್ಯಕ್ಷರ ಆಗಮನದೊಂದಿಗೆ ವಾರ್ಡ್ ನಂ.42 ಲಕ್ಷ್ಮೀದೇವಿನಗರ, ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ:–42ರ ವಾರ್ಡ್ ಕಛೇರಿಯಲ್ಲಿ ನಡೆಸಲಾಗಿದ್ದು, ಸದರಿ ಸಭೆಯ ಸಭಾ ನಡವಳಿಗಳು ಈ ಕೆಳಕಂಡಂತಿರುತ್ತದೆ.

**ಸಭೆಗೆ ಹಾಜರಿದ್ದ ಅಧಿಕಾರಿಗಳು:–**

1. ಶ್ರೀ. ರಮೇಶ್ ಎನ್. ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು
2. ಶ್ರೀಮತಿ. ನಿರ್ಮಲ ಕೆ. ಕಂದಾಯ ವಸೂಲಿಗಾರರು ವಾರ್ಡ್ ನಂ.42.
3. ಶ್ರೀ. ದೇವರಾಜು, ಮೇಲ್ವಿಚಾರಕರು, ವಾರ್ಡ್ ನಂ.42.
4. ಶ್ರೀಮತಿ. ಪ್ರಮಿಳ ಎಂ.ಸಿ. ಲಿಂಕ್ ವರ್ಕರ್ಸ್, ಎಸ್.ಡಬ್ಲ್ಯೂ.ಎಂ.
5. ಶ್ರೀಮತಿ. ಧಾಕ್ಷಾಯಣಿ, ಎಂ. .ಸಿ. ಲಿಂಕ್ ವರ್ಕರ್ಸ್, ಎಸ್.ಡಬ್ಲ್ಯೂ.ಎಂ.
6. ಶ್ರೀ. ಮಂಜುನಾಥ್.ಬಿ.ಸಿ. ಕಿರಿಯ ಅಭಿಯಂತರರು, ಬೆಸ್ಕಾಂ, ವಾರ್ಡ್ ನಂ.42.
7. ನವೀನ್ ಕುಮಾರ್ ವಾರ್ಡ್ ಮಾರ್ಷಲ್.
8. ಬಿ.ಎನ್ ಶಶಿಧರ್ ಕಂದಾಯ ಪರಿವೀಕ್ಷಕರು ವಾರ್ಡ್ ನಂ.42.
9. ಎಸ್. ಸಿದ್ದರಾಜು ಕಂದಾಯ ಪರಿವೀಕ್ಷಕರು ವಾರ್ಡ್ ನಂ.42.

**ಸಭೆಗೆ ಗೈರು ಹಾಜರಿದ್ದ ಅಧಿಕಾರಿಗಳು:–**

01. ಅರಣ್ಯ ಇಲಾಖೆ, ತೋಟಗಾರಿಕೆ ಇಲಾಖೆ ಅಧಿಕಾರಿಗಳು
02. ಬೀದಿ ದೀಪಗಳ ಪರಿವೀಕ್ಷಕರು
03. ಪಶು ಸಂಗೋಪನೆ ಇಲಾಖೆ ವಾರ್ಡ್–42.
04. ಅಗ್ನಿ ಶಾಮಕ ಠಾಣೆ, ಟಿ.ವಿ.ಎಸ್.ಕ್ರಾಸ್ ಪೀಣ್ಯ,
05. ಬಿಡಬ್ಲ್ಯೂ.ಎಸ್.ಎಸ್.ಬಿ. ಅಧಿಕಾರಿಗಳು.
06. ಪೋಲಿಸ್ ಇಲಾಖೆ(ಕಾನೂನು ಮತ್ತು ಸುವ್ಯವಸ್ಥೆ).
07. ಪೋಲಿಸ್ ಇಲಾಖೆ ಸಂಚಾರ.

ವಾರ್ಡ್–42ರ ವಾರ್ಡ್ ಸಮಿತಿ ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಕಾರ್ಯದರ್ಶಿಗಳು ಸ್ವಾಗತಿಸಿ ವಾರ್ಡ್ ಸಮಿತಿ ಸಭೆಯನ್ನು ಆರಂಭಿಸಿದರು.

ಶ್ರೀಮತಿ.ದಾಕ್ಷಯಣಿ ರವರು ಮಾತನಾಡಿ ವೀಣಾ ಸ್ಕೂಲ್ ಹಾಗೂ ಗೀತಾ ಸ್ಕೂಲ್ ಹತ್ತಿರ ಚರಂಡಿಗಳಲ್ಲಿ ಹೂಳು ತುಂಬಿಕೊಂಡಿದ್ದು ನೀರು ಸಲಿಸಾಗಿ ಹರಿಯುತ್ತಿಲ್ಲದ ಕಾರಣ ಹೂಳನ್ನು ತೆರವುಗೊಳಿಸಬೇಕೆಂದು ವಿನಂತಿಸಿದರು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು, ಗೊರಗುಂಟೆಪಾಳ್ಯ ಉಪವಿಭಾಗ, ಬಿ.ಬಿ.ಎಂ.ಪಿ**

ಮು.ತಿ.ನೋ

ದೇವರಾಜು ರವರು ಮಾತನಾಡಿ ನಂದಿನಿ ಲೇಔಟ್ 2ನೇ ಬ್ಲಾಕ್‌ನಲ್ಲಿ ಕಾವೇರಿ ನೀರಿನ ಪೈಪ್ ಒಂದು ಒಡೆದು ನೀರು ಹರಿಯುತ್ತಿದ್ದು ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರು.

ಕ್ರಮ: **ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ NW2 Sub Division.**

ಬೆ.ವಿ.ಕಂ ಜೆ.ಇ ಆದ ಮಂಜುನಾಥ ರವರು ಮಾತನಾಡಿ ಬೆ.ವಿ.ಕಂ ಇಲಾಖೆಯಿಂದ ಹೊಸದಾಗಿ ಯೋಜನೆಯೊಂದು ಜಾರಿಗೆ ಬಂದಿದ್ದು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಕ್ಕೆ ಸೇರಿದ ಎಲ್ಲಾ ಬಡತನ ರೇಖೆಗಿಂತ ಕೆಳಗಿರುವ (ಬಿ.ಪಿ.ಎಲ್) ಕುಟುಂಬಕ್ಕೆ ಮಾಸಿಕ 75 ಯೂನಿಟ್‌ಗಳ ವರೆಗಿನ ಉಚಿತ ವಿದ್ಯುತ್ ಸೌಲಭ್ಯವನ್ನು ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳಬೇಕೆಂದು ಜಾಗೃತಿ ಮುಡಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Manjunath.K

**(ಶ್ರೀ. ಮಂಜುನಾಥ ಕೆ.)**
**ಸಹಾಯಕ ಅಭಿಯಂತರರು**
**ಮತ್ತು ಕಾರ್ಯದರ್ಶಿ**
**ವಾರ್ಡ್–42.**

**(ಶ್ರೀ.ಎನ್.ರಮೇಶ್)**
**ಸಹಾಯಕ ಕಂದಾಯ ಅಧಿಕಾರಿಗಳು**
**ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು**

ಪ್ರತಿಯನ್ನು:-

1. ವಲಯ ಆಯುಕ್ತರು, ರಾರಾನವ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2. ವಲಯ ಜಂಟಿ ಆಯುಕ್ತರು, ರಾರಾನವ ರವರ ಅವಗಾಹನೆಗೆ ಸಲ್ಲಿಸಿದೆ.
3. ಅಧೀಕ್ಷಕ ಅಭಿಯಂತರರು, ವಾರ್ಡ್‌ಕಮಿಟಿ ಮೇಲುಸ್ತುವಾರಿ ಅಧಿಕಾರಿಗಳು, ರಾರಾನವ ರವರ ಅವಗಾಹನೆಗೆ ಸಲ್ಲಿಸಿದೆ.